ಸ್ವೀಕೃತಿ
09/3/2020

# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 589

ಸದಸ್ಯರ ಹೆಸರು : ಡಾ॥ ಜೈಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 09-03-2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರಿ ಶಾಲೆಗಳಲ್ಲಿ ಕಲಿಯುವ ವಿದ್ಯಾರ್ಥಿಗಳು ಕೀಳರಿಮೆ ಮತ್ತು ಹಿಂಜರಿಕೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಆ. | ಈ ಕೀಳರಿಮೆಗೆ ಸರ್ಕಾರಿ ಶಾಲೆಗಳ ಕಟ್ಟಡ/ ಭೋಧನಾ ಸೌಕರ್ಯ ಮತ್ತು ಶಾಲಾ ಪರಿಸರ ಕಾರಣವೇ; ಅಥವಾ ಪಠ್ಯಕ್ರಮ /ಬೋಧನಾ ವಿಧಾನ ಕಾರಣವೇ; | ಉದ್ಭವಿಸುವುದಿಲ್ಲ. |
| ಇ. | ವಿದ್ಯಾರ್ಥಿಗಳ ಹಾಗೂ ಪೋಷಕರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳು ಕಾರಣವೇ ಎಂಬ ನಿಟ್ಟಿನಲ್ಲಿ ಅಧ್ಯಯನ ನಡೆಲಾಗಿದೆಯೇ; ನಡೆಸಿದ್ದಲ್ಲಿ ಕಂಡುಕೊಂಡ ಕಾರಣಗಳು ಮತ್ತು ಪರಿಹಾರಗಳೇನು? | ಸರ್ಕಾರಿ ಶಾಲೆಗಳಲ್ಲಿ ಹಾಗೂ ಖಾಸಗಿ ಉತ್ತಮ ಶಾಲೆಗಳಲ್ಲಿ ಕಲಿಕೆಯ ಅಂತರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಪೋಷಕರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳು ವಿದ್ಯಾರ್ಥಿಗಳ ಹಾಜರಾತಿ ಹಾಗೂ ವಿದ್ಯಾಭ್ಯಾಸ ಮುಂದುವರಿಕೆಯ ಮೇಲೆ ಬೀರುವ ಪರಿಣಾಮಗಳನ್ನು ಮಿತಿಗೊಳಿಸುವ ಸಂಬಂಧ ಸರ್ಕಾರದಿಂದ ಈ ಕೆಳಗಿನಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಸರ್ಕಾರಿ ಶಾಲಾ ವಿದ್ಯಾರ್ಥಿಗಳಲ್ಲಿ ಇಂಗ್ಲೀಷ್ ಕಲಿಕೆಯ ಕುರಿತು ಇರುವ ಹಿಂಜರಿಕೆಯನ್ನು ಹೋಗಲಾಡಿಸಲು ರಾಜ್ಯದ 1000 ಶಾಲೆಗಳಲ್ಲಿ Bilingual (ದ್ವಿಭಾಷಾ) ಮಾದರಿಯಲ್ಲಿ ಪಠ್ಯಕ್ರಮವನ್ನು ಕಲಿಸಲಾಗುತ್ತಿದೆ. |

| | | |
|---|---|---|
| | | • ಒಂದನೇ ತರಗತಿಯಿಂದಲೇ ಕನ್ನಡ ಹಾಗೂ ಇತರೆ ಅಲ್ಪಸಂಖ್ಯಾತ ಭಾಷಾ ಮಾಧ್ಯಮ ಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಒಂದು ವಿಷಯವನ್ನಾಗಿ ಕಲಿಸಲು ಅವಕಾಶ ಕಲ್ಪಿಸಲಾಗಿದೆ.<br>• ಮಕ್ಕಳ ದಾಖಲಾತಿ ಹೆಚ್ಚಿಸಲು ಶಾಲಾ ಶಿಕ್ಷಕರು ಮತ್ತು ಎಸ್.ಡಿ.ಎಂ.ಸಿ ಪದಾಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಹೆತ್ತವರ ಮನ ಒಲಿಸಲು ಪ್ರಯತ್ನಿಸಲಾಗುತ್ತಿದೆ<br>• ಶಾಲಾ ಭೌತಿಕ ಸೌಲಭ್ಯಗಳನ್ನು ಉತ್ತಮ ಪಡಿಸಲಾಗುತ್ತಿದೆ.<br>• 1ನೇ ತರಗತಿಯಿಂದ 3ನೇ ತರಗತಿಗೆ ನಲಿಕಲಿ ಪದ್ಧತಿಯನ್ನು ಅಳವಡಿಸಲಾಗಿದೆ ಹಾಗೂ ಸಂತಸದಾಯಕ ಕಲಿಕೆಗೆ ಒತ್ತು ನೀಡಲಾಗಿದೆ.<br>• ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರವನ್ನು ವಿತರಿಸಲಾಗುತ್ತಿದೆ.<br>• 1 ರಿಂದ 10ನೇ ತರಗತಿಗಳ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಉಚಿತ ಪಠ್ಯ ಪುಸ್ತಕಗಳನ್ನು ವಿತರಿಸಲಾಗುತ್ತಿದೆ.<br>• ಉಚಿತ ಬೈಸಿಕಲ್: ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 8ನೇ ತರಗತಿ ವಿದ್ಯಾರ್ಥಿಗಳಿಗೆ ಬೈಸಿಕಲ್ ವಿತರಣೆ ಮಾಡಲಾಗುತ್ತಿದೆ.<br>• ಅಕ್ಷರ ದಾಸೋಹ ಮತ್ತು ಕ್ಷೀರಭಾಗ್ಯ ಕಾರ್ಯಕ್ರಮದಡಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಬಿಸಿ ಊಟ ಮತ್ತು ಹಾಲು ನೀಡಲಾಗುತ್ತಿದೆ<br>• ಶೂಭಾಗ್ಯ ಯೋಜನೆ: ಸರ್ಕಾರಿ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ವಿತರಿಸಲಾಗುತ್ತಿದೆ.<br>• ಮಕ್ಕಳ ಕಲಿಕೆಯನ್ನು ಉತ್ತಮಪಡಿಸಿ ಪ್ರಗತಿ ಪಡಿಸಿಕೊಳ್ಳಲು ಸರ್ಕಾರಿ ಶಾಲೆಗಳ 4 ರಿಂದ 9ನೇ |

| | | |
|---|---|---|
| | | ತರಗತಿ ವಿದ್ಯಾರ್ಥಿಗಳಿಗೆ ಅಭ್ಯಾಸ ಪುಸ್ತಕಗಳನ್ನು ವಿತರಿಸಲಾಗುತ್ತಿದೆ.<br>• ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಪರಿಶೀಲಿಸಲಾಗುತ್ತಿದೆ.<br>• ಪ್ರೌಢಶಾಲಾ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲಾಗುತ್ತಿದೆ.<br>• ಗ್ರಾಮಾಂತರ ಪ್ರದೇಶಗಳಲ್ಲಿ 74 ಆದರ್ಶ ವಿದ್ಯಾಲಯಗಳ ಸ್ಥಾಪನೆ ಮೂಲಕ ಗ್ರಾಮೀಣ ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸಲಾಗಿದೆ.<br>• ಒಂದೇ ಕಾಂಪೌಂಡ್‌ನಲ್ಲಿರುವ ಅಥವಾ ಸಮೀಪದಲ್ಲಿರುವ 1 ರಿಂದ 12ನೇ ತರಗತಿಯವರೆಗೆ ಶಾಲೆಗಳನ್ನು ಒಟ್ಟುಗೂಡಿಸಿ ರಾಜ್ಯದಲ್ಲಿ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲಾಗಿದೆ. ಈ ಮೂಲಕ ಶಾಲಾ ಭೌತಿಕ ಹಾಗೂ ಶೈಕ್ಷಣಿಕ ಸೌಲಭ್ಯ ಹೆಚ್ಚಿಸಿ, ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ಕೈಗೊಳ್ಳಲಾಗಿದೆ.<br>• ಸರ್ಕಾರಿ ಶಾಲೆಯ ಆವರಣದಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಕೇಂದ್ರಗಳನ್ನಾಗಿ ಬಲವರ್ಧಿಸುವ ಹಾಗೂ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. |

**ಇಪಿ 6 ಪಿಎಂಎ 2020**

**(ಎಸ್. ಸುರೇಶ್ ಕುಮಾರ್)**

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.